# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ತರಲಾದ ಸುಧಾರಣೆಗಳ ಬಗ್ಗೆ ಅಧ್ಯಯನ ಮಾಡುವ ಕುರಿತು.

**ಓದಲಾಗಿದೆ:** ಇನ್ಸಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ಬೆಂಗಳೂರು ಇವರ ಪ್ರಸ್ತಾವನೆ, ದಿನಾಂಕ 25.03.2017

***

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ಜಾರಿಗೊಳಿಸುವ ಮೂಲಕ ವಿಕೇಂದ್ರೀಕರಣ ತತ್ವಕ್ಕನುಸಾರವಾಗಿ ರಾಜ್ಯದಲ್ಲಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ, ಪ್ರಕಾರ್ಯಗಳು ಹಾಗೂ ಸಿಬ್ಬಂದಿಗಳನ್ನು ಹಸ್ತಾಂತರಿಸಲಾಗಿದೆ. ಆಯಾ ಪ್ರಕಾರ್ಯಗಳನ್ನು ಆಯಾ ಹಂತಗಳಲ್ಲಿಯೇ ಅನುಷ್ಠಾನಗೊಳಿಸಲು ಅನುವಾಗುವಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಯೋಜನೆಗಳನ್ನು ಗ್ರಾಮ ಪಂಚಾಯತಿಯಿಂದ ಅನುಷ್ಠಾನಗೊಳಿಸಲಾಗಿದ್ದು, ಗ್ರಾಮ ಪಂಚಾಯತಿಗಳ ಸ್ಥಳೀಯ ಸರ್ಕಾರಗಳಂತೆ ಕಾರ್ಯನಿರ್ವಹಿಸುತ್ತಿವೆ.

ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ಕ್ಕೆ ಇತ್ತೀಚಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ಎಂದು ಮರು ನಾಮಕರಣ ಮಾಡಲಾಗಿದೆ. ಜನವಸತಿ ಸಭೆಗಳನ್ನು ಆಯೋಜಿಸುವುದು, ಜಿಲ್ಲಾ ಪಂಚಾಯತ್ ಅಧ್ಯಕ್ಷರಿಗೆ ರಾಜ್ಯ ಸಚಿವ ಸ್ಥಾನಮಾನ ನೀಡುವುದು, ಮೂರು ಹಂತದ ಸದಸ್ಯರ ಮೀಸಲಾತಿಯನ್ನು 2 ಅವಧಿಗೆ ವಿಸ್ತರಿಸುವುದು, ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರ ಅವಧಿಯನ್ನು 5 ವರ್ಷಗಳಿಗೆ ನಿಗದಿಪಡಿಸುವುದು, ಜಿಲ್ಲಾ ಮಟ್ಟದಲ್ಲಿ ಕುಂದು ಕೊರತೆಗಳ ಪ್ರಾಧಿಕಾರ ರಚಿಸುವುದು, ಪಂಚಾಯತ್ ರಾಜ್ ಆಡಳಿತ ವ್ಯವಸ್ಥೆಯನ್ನು ಬಲಪಡಿಸಲು ಪ್ರತ್ಯೇಕ ನಿರ್ದೇಶನಾಲಯ ಸ್ಥಾಪಿಸುವುದು, ಪಂಚಾಯತ್ ರಾಜ್ ಆಡಳಿತಾತ್ಮಕ ಸೇವೆ ಸ್ಥಾಪಿಸುವುದು, ಹೀಗೆ ಕಾಯ್ದೆಗೆ ಒಟ್ಟು 88 ತಿದ್ದುಪಡಿಗಳನ್ನು ತಂದು ಅಮೂಲಾಗ್ರ ಬದಲಾವಣೆಗಳನ್ನು ತರಲಾಗಿದೆ. ಅಲ್ಲದೆ, ಪಂಚಾಯತ್ ಆಡಳಿತ ವ್ಯವಸ್ಥೆಯನ್ನು ಪರಿಣಾಮಕಾರಿಗೊಳಿಸಲು ಶ್ರೀ ನಂಜಯ್ಯನಮಠ ಸಮಿತಿ ನೀಡಿದ ವರದಿಯಂತೆ 460 ಗ್ರಾಮ ಪಂಚಾಯತಿಗಳನ್ನು ಹೊಸದಾಗಿ ರಚಿಸಿದ್ದು, ಈಗಾಗಲೇ ಕಾರ್ಯ ನಿರ್ವಹಿಸುತ್ತಿವೆ.

ಮೇಲೆ ಓದಲಾದ ಪತ್ರದಲ್ಲಿ ಇನ್ಸಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ಬೆಂಗಳೂರು ಇವರು ಕರ್ನಾಟಕ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ತರಲಾದ ಬದಲಾವಣೆಗಳು ಹಾಗೂ ಜಾರಿಗೊಳಿಸಲಾದ ಸುಧಾರಣೆಗಳ ಬಗ್ಗೆ ಅಧ್ಯಯನ ಮಾಡಿ ಅಲ್ಲಿನ ಒಳ್ಳೆಯ ಅಂಶಗಳು ಹಾಗೂ ನ್ಯೂನತೆಗಳ ಬಗ್ಗೆ ವರದಿ ಮಾಡುವುದಾಗಿ ರೂ.14.30 ಲಕ್ಷಗಳ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಪಾತ್ರದ ಬಗ್ಗೆ, ವಿಕೇಂದ್ರೀಕರಣ ವ್ಯವಸ್ಥೆ, ತಿದ್ದುಪಡಿಗಳ ಮೂಲಕ ತರಲಾದ ಬದಲಾವಣೆಗಳು, ಉತ್ತರದಾಯಿತ್ವ, ತೀರ್ಮಾನ ತೆಗೆದುಕೊಳ್ಳುವ ಅಧಿಕಾರ, ರಾಜಕೀಯ ಮತ್ತು ಆರ್ಥಿಕ ಸ್ವಾಯತ್ತತೆ, ಸಮಗ್ರ ಗ್ರಾಮೀಣ ಅಭಿವೃದ್ಧಿ ಯೋಜನೆಯ ಚೌಕಟ್ಟು ಮತ್ತು ಸಂರಕ್ಷಣೆ, ಪಂಚಾಯತ್ ರಾಜ್ ಅಧಿನಿಯಮಕ್ಕೆ ತಿದ್ದುಪಡಿಗಳು, ಸಾಂಸ್ಥಿಕ ಮತ್ತು ಯೋಜನೆಗಳಿಗೆ ಸಂಬಂಧಿಸಿದ ಅಂಶಗಳು, ಜನವಸತಿ, ವಾರ್ಡ್ ಮತ್ತು ಗ್ರಾಮಸಭೆಗಳು, ಆಡಳಿತಾತ್ಮಕ ಅಂಶಗಳು, ಲೆಕ್ಕ ಪದ್ಧತಿ, ಅಧಿಕಾರಿ/ನೌಕರರ ಕರ್ತವ್ಯಗಳು, ಜಮಾಬಂಧಿ, ಕುಂದು ಕೊರತೆ ನಿವಾರಣೆ ವ್ಯವಸ್ಥೆ, ರಾಜಕೀಯ, ಆರ್ಥಿಕ ಅಂಶಗಳು, ಆಡಳಿತದಲ್ಲಿ ಮಾಹಿತಿ ತಂತ್ರಜ್ಞಾನ ಬಳಕೆ, ತರಬೇತಿಗಳು, ಪರಿಣಾಮಕಾರಿ ಅನುದಾನ ಬಳಕೆ, ಜವಾಬ್ದಾರಿಗಳು ಮತ್ತು ಪ್ರಕಾರ್ಯಗಳನ್ನು ನಿರ್ವಹಿಸುವುದು, ಪಂಚಾಯತ್ ರಾಜ್ ಸಂಸ್ಥೆಯ ಅಧೀನದಲ್ಲಿರುವ 29 ವಿಷಯಗಳ ಸಮರ್ಪಕ ಅನುಷ್ಠಾನ, ರಾಜ್ಯ ಮತ್ತು ಕೇಂದ್ರ ಸರ್ಕಾರದ ಯೋಜನೆಗಳ ಅನುಷ್ಠಾನ, ಗ್ರಾಮ ಪಂಚಾಯತಿ ಸಿಬ್ಬಂದಿ ಕಾರ್ಯನಿರ್ವಹಣೆ ಮತ್ತು ನಿಯಂತ್ರಣ, ಅಧೀನ ಇಲಾಖೆಗಳ ಕಾರ್ಯಗಳು, ಮಹಿಳಾ ಸದಸ್ಯರ ಸಮಸ್ಯೆಗಳು, ಪಾರದರ್ಶಕತೆಯ ಆಡಳಿತದಲ್ಲಿ ಮಾಹಿತಿ ತಂತ್ರಜ್ಞಾನ ಬಳಕೆ, ಇತರೆ ವಿಷಯಗಳ ಬಗ್ಗೆ ಅಧ್ಯಯನ ಕೈಗೊಂಡು, ಸೂಕ್ತ ಬದಲಾವಣೆಗಳನ್ನು ತಂದು ರಾಜ್ಯದ ಪಂಚಾಯತ್ ರಾಜ್ ವ್ಯವಸ್ಥೆಯಲ್ಲಿ ಹೆಚ್ಚಿನ ಸುಧಾರಣೆಗಳನ್ನು ತಂದಿರುವ ಹಿನ್ನೆಲೆಯಲ್ಲಿ ತರಲಾದ ಸುಧಾರಣೆಗಳು ತಳಮಟ್ಟದಲ್ಲಿ ಕಾರ್ಯಗತ ಜಾರಿಯಾಗಿರುವ ಬಗ್ಗೆ ಅಧ್ಯಯನ ಮಾಡಿ ವರದಿ ಪಡೆಯುವುದು ಸೂಕ್ತವಾಗಿದೆ.

ಈ ಅಧ್ಯಯನ ಕಾರ್ಯವನ್ನು ಇಲಾಖೆಯ ಅಂಗಸಂಸ್ಥೆಯಾದ ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಮೂಲಕ ಕೈಗೊಳ್ಳಲು ತೀರ್ಮಾನಿಸಿದ್ದು, ಈ ಅಧ್ಯಯನ ಕೈಗೊಳ್ಳಲು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 367 ಗ್ರಾಪಂಅ 2017, ಬೆಂಗಳೂರು, ದಿನಾಂಕ 19.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಪಾತ್ರದ ಬಗ್ಗೆ ಅಧ್ಯಯನ ಕೈಗೊಳ್ಳಲು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಲಾಗಿದೆ.

ಈ ಅಧ್ಯಯನ ಕಾರ್ಯಕ್ಕೆ ತಗಲಬಹುದಾದ ವೆಚ್ಚವನ್ನು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಕರ್ನಾಟಕ ಪಂಚಾಯತ್ ರಾಜ್ ಲೆಕ್ಕ ಶೀರ್ಷಿಕೆ ಕರ್ನಾಟಕ ಪಂಚಾಯತ್ ರಾಜ್ (ಯೋಜನೆ) ಲೆಕ್ಕಶೀರ್ಷಿಕೆ **2515-00-101-0-09-103** ರಲ್ಲಿ ನೀಡಲಾಗುವುದು.

ಈ ಅಧ್ಯಯನ ಕಾರ್ಯವನ್ನು ಅನುಷ್ಠಾನಗೊಳಿಸುವಲ್ಲಿ ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ಬೆಂಗಳೂರು ಇವರ ಸೇವೆಯನ್ನು ನಿಯಮಾನುಸಾರ ಪಡೆದುಕೊಳ್ಳಬಹುದಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ನಿರ್ದೇಶಕರು, ಎ.ಎನ್.ಎಸ್.ಎಸ್.ಐ.ಆರ್.ಡಿ., ಮೈಸೂರು.
4) ಅಧ್ಯಕ್ಷರು, ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ನವದೆಹಲಿ.
5) ನಿರ್ದೇಶಕರು(ಪಂ.ರಾಜ್-2), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
6) ಮುಖ್ಯಸ್ಥರು, ಗ್ರಾಮ ಸ್ವರಾಜ್ ಯೋಜನೆ.
7) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
8) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
9) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.